# ಕರ್ನಾಟಕ ವಿಧಾನ ಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ಗುರುತಿನ ಪ್ರಶ್ನೆ**

ದಿನಾಂಕ : 22-03-2021 ಪ್ರಶ್ನೆ ಸಂಖ್ಯೆ : 241 (1833)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 22-03-2021

ಉತ್ತರಿಸುವ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ, ಕೌಶಲ್ಯಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು

ವಿಷಯ : ಅನುದಾನಿತ ಪದವಿ ಕಾಲೇಜುಗಳಲ್ಲಿ ಅನುಕಂಪದ ಹುದ್ದೆ ಭರ್ತಿ ಮಾಡುವ ಬಗ್ಗೆ

(ಅ) ಅನುದಾನಿತ ಪದವಿ ಕಾಲೇಜುಗಳಲ್ಲಿ ಸೇವೆ ನಿರ್ವಹಿಸುತ್ತಿರುವಾಗಲೇ ಮರಣ ಹೊಂದಿದ ಸಂದರ್ಭದಲ್ಲಿ ಅವರ ಕುಟುಮಬಸ್ಥರಿಗೆ ಅನುಕಂಪದ ಹುದ್ದೆಯನ್ನು ನೀಡುವ ಬಗ್ಗೆ ಪ್ರಸ್ತುಕ ಇರುವ ನಿಯಮ ಮತ್ತು ಅವಕಾಶಗಳೇನು;

(ಆ) ಉಳಿದೆಲ್ಲ ಇಲಾಖೆಗಳಲ್ಲಿ ಅನುಕಂಪದ ಆಧಾರದ ಮೇಲೆ ಉದ್ಯೋಗ ಕೊಡುವ ನಿಯಮವಿದ್ದು, ಅನುದಾನಿತ ಪದವಿ ಕಾಲೇಜುಗಳಲ್ಲಿ ಮಾತ್ರ ಅವಕಾಶ ಇಲ್ಲದಿರುವುದಕ್ಕೆ ಕಾರಣಗಳೇನು;

(ಇ) ಅನುದಾನಿತ ಪದವಿ ಕಾಲೇಜುಗಳಲ್ಲಿ ಅನುಕಂಪದ ಹುದ್ದೆಯನ್ನು ನೀಡುವ ಕುರಿತು ಸರ್ಕಾರದ ಸ್ಪಷ್ಟ ನಿಲುವೇನು ; ಯಾವ ಕಾಲಮಿತಿಯೊಳಗೆ ಇಂತಹ ಹುದ್ದೆ ಅನುಕಂಪದ ಆಧಾರದ ಮೇಲೆ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು ?